# ಕರ್ನಾಟಕ ವಿಧಾನ ಪರಿಷತ್ತು
## ನೂರ ಮೂವತ್ತೈದನೆಯ ಅಧಿವೇಶನ
## ಲಘು ಪ್ರಕಟಣೆ ಭಾಗ – 2

(ಸಾಂಸದಿಕ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದ ಸಾಮಾನ್ಯ ಮಾಹಿತಿ)
ಶನಿವಾರ, ದಿನಾಂಕ: 30ನೇ ಜೂನ್, 2018

ಸಂಖ್ಯೆ:22

ಅಧಿವೇಶನದ ಸಮಯದಲ್ಲಿ ವಿಧಾನ ಪರಿಷತ್ತಿನ ಅಧಿಕಾರಿಗಳ ಗ್ಯಾಲರಿಯಲ್ಲಿ ಸಚಿವರ ಆಪ್ತ ಸಿಬಂದ್ದಿ ವರ್ಗದವರು ಹೆಚ್ಚಿನ ಸಂಖ್ಯೆಯಲ್ಲಿ ಆಸೀನರಾಗುವುದಲ್ಲದೆ ಹಿರಿಯ ಅಧಿಕಾರಿಗಳಿಗೆ ಕುಳಿತುಕೊಳ್ಳಲು ಸ್ಥಾನವಿಲ್ಲದೆ ಮುಜುಗರಕ್ಕೀಡು ಮಾಡಿರುತ್ತಾರೆಂದು ಹಿರಿಯ ಅಧಿಕಾರಿಗಳು ಆಕ್ಷೇಪಣೆ ಮಾಡಿರುತ್ತಾರೆ, ಹಾಗೆಯೇ ವಿಧಾನ ಪರಿಷತ್ತಿನ ಮೊಗಸಾಲೆಗಳಲ್ಲಿ ಶಾಸಕರ ಆಪ್ತ ಸಹಾಯಕರು ಹಾಗೂ ಅಂಗರಕ್ಷಕರುಗಳು ಅಲ್ಲದೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಕುಳಿತು ಶಾಸಕರುಗಳಿಗೆ ಕುಳಿತುಕೊಳ್ಳಲು ಆಸನಗಳಿಲ್ಲದಂತೆ ಮಾಡುತ್ತಿರುವುದನ್ನು ಗಮನಿಸಲಾಗಿದೆ. ಈ ನಿಟ್ಟಿನಲ್ಲಿ ಸದನದ ಗಾಂಭೀರ್ಯತೆ ಮತ್ತು ಶಿಸ್ತನ್ನು ಕಾಯ್ದುಕೊಳ್ಳುವ ಸಲುವಾಗಿ ಸನ್ಮಾನ್ಯ ಸಭಾಪತಿಗಳು ಈ ಕೆಳಕಂಡಂತೆ ಕಟ್ಟುನಿಟ್ಟಿನ ನಿರ್ದೇಶನ ನೀಡಿರುತ್ತಾರೆ.

01. ವಿಧಾನ ಪರಿಷತ್ತಿನ ಅಧಿವೇಶನದ ಅವಧಿಯಲ್ಲಿ ವಿಧಾನ ಪರಿಷತ್ತಿನ ಮೊಗಸಾಲೆಗಳಲ್ಲಿ ಶಾಸಕರುಗಳ ಆಪ್ತ ಸಹಾಯಕರುಗಳಿಗೆ ಹಾಗೂ ಅಂಗರಕ್ಷಕರಿಗೆ ವಿಧಾನ ಪರಿಷತ್ತಿನ ಮೊಗಸಾಲೆಯ ಪ್ರವೇಶ ನಿರಾಕರಿಸಲಾಗಿದೆ, ಅದೇ ರೀತಿ ಸಂಸದೀಯ ಕಾರ್ಯದರ್ಶಿಗಳ ಸಿಬ್ಬಂದಿಗಳಿಗೆ ಕೂಡ ಪ್ರವೇಶವನ್ನು ನಿರಾಕರಿಸಲಾಗಿದೆ.

02. ಮಾನ್ಯ ಸಚಿವರುಗಳ ಆಪ್ತ ಕಾರ್ಯದರ್ಶಿ ಅಥವಾ ಒಬ್ಬ ಆಪ್ತ ಸಹಾಯಕ ಮಾತ್ರ ವಿಧಾನ ಪರಿಷತ್ತಿನ ಅಧಿಕಾರಿಗಳ ಗ್ಯಾಲರಿಗೆ ಪ್ರವೇಶಿಸಬಹುದಾಗಿರುತ್ತದೆ.

03. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳು ಹಾಗೂ ಉಪ ಕಾರ್ಯದರ್ಶಿ ಮತ್ತು ಹಿರಿಯ ಅಧಿಕಾರಿಗಳು ಮಾತ್ರ ವಿಧಾನ ಪರಿಷತ್ತಿನ ಮೊಗಸಾಲೆ ಹಾಗೂ ಅಧಿಕಾರಿಗಳ ಗ್ಯಾಲರಿಗೆ ಪ್ರವೇಶಿಸಬಹುದಾಗಿರುತ್ತದೆ.

ಆದುದರಿಂದ, ಸನ್ಮಾನ್ಯ ಸಭಾಪತಿಯವರ ನಿರ್ದೇಶನಗಳನ್ನು ಪಾಲಿಸುವ ನಿಟ್ಟಿನಲ್ಲಿ ಮಾನ್ಯ ಸಚಿವರುಗಳು ಹಾಗೂ ಶಾಸಕರುಗಳು ಸಹಕರಿಸಬೇಕಾಗಿ ಈ ಮೂಲಕ ಕೋರಲಾಗಿದೆ.

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

**ವಿಧಾನ ಪರಿಷತ್ತಿನ ಎಲ್ಲಾ ಮಾನ್ಯ ಸದಸ್ಯರುಗಳ ಮಾಹಿತಿಗಾಗಿ**

# ಕರ್ನಾಟಕ ವಿಧಾನ ಪರಿಷತ್ತು

## 135ನೇ ಅಧಿವೇಶನ

**<u>ಲಘು ಪ್ರಕಟಣೆ ಭಾಗ-2</u>**

(ಸಾಂಸದಿಕ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದ ಸಾಮಾನ್ಯ ಮಾಹಿತಿ)

**ಸೋಮವಾರ, ದಿನಾಂಕ: 02ನೇ ಜುಲೈ, 2018**

**ಸಂಖ್ಯೆ: 23**

ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 9ರ ಮೇರೆಗೆ ಮಾನ್ಯ ಸಭಾಪತಿಯವರ ಮತ್ತು ಉಪ ಸಭಾಪತಿಯವರ ಗೈರು ಹಾಜರಿಯಲ್ಲಿ ಸಭಾಪತಿಯವರ ಸ್ಥಾನದಲ್ಲಿ ಪದಧಾರಣ ಮಾಡಲು ಈ ಮುಂದಿನ ಸದಸ್ಯರನ್ನು ಮಾನ್ಯ ಸಭಾಪತಿಯವರು ನಾಮನಿರ್ದೇಶನ ಮಾಡಿರುತ್ತಾರೆಂದು ಈ ಮೂಲಕ ತಿಳಿಸಲಾಗಿದೆ.

1. ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ
2. ಶ್ರೀ ಕೆ.ಸಿ. ಕೊಂಡಯ್ಯ
3. ಶ್ರೀ ಕೆ.ಬಿ. ಶಾಣಪ್ಪ
4. ಶ್ರೀ ಮರಿತಿಬ್ಬೇಗೌಡ

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಿಗೆ,**

# ಕರ್ನಾಟಕ ವಿಧಾನ ಪರಿಷತ್ತು
# ನೂರ ಮೂವತ್ತೈದನೆಯ ಅಧಿವೇಶನ

ಲಘು ಪ್ರಕಟಣೆ ಭಾಗ –2

(ಸಾಂಸದಿಕ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದ ಸಾಮಾನ್ಯ ಮಾಹಿತಿ)

**ಸೋಮವಾರ, ದಿನಾಂಕ: 02ನೇ ಜುಲೈ, 2018**

ಸಂಖ್ಯೆ: **24**

ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ ನಿಯಮ 2(2)ರ ಪ್ರಕಾರ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ **ಶ್ರೀ ಕೋಟ ಶ್ರೀನಿವಾಸ ಪೂಜಾರಿ,** ಅವರನ್ನು ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರನ್ನಾಗಿ ದಿನಾಂಕ: 2ನೇ ಜುಲೈ, 2018ರಿಂದ ಜಾರಿಗೆ ಬರುವಂತೆ ಮಾನ್ಯ ಸಭಾಪತಿಯವರು ಮಾನ್ಯತೆ ನೀಡಿರುತ್ತಾರೆ.

ಕೆ.ಆರ್. ಮಹಾಲಕ್ಷ್ಮಿ
ಕಾರ್ಯದರ್ಶಿ

ವಿಧಾನ ಪರಿಷತ್ತಿನ ಎಲ್ಲಾ ಮಾನ್ಯ ಸದಸ್ಯರುಗಳ ಮಾಹಿತಿಗಾಗಿ.

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೈದನೆಯ ಅಧಿವೇಶನ

### ಲಘು ಪ್ರಕಟಣೆ ಭಾಗ –2

(ಸಾಂಸದಿಕ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದ ಸಾಮಾನ್ಯ ಮಾಹಿತಿ)

**ಸೋಮವಾರ, ದಿನಾಂಕ: 02ನೇ ಜುಲೈ, 2018**

ಸಂಖ್ಯೆ: **25**

ಕರ್ನಾಟಕ ವಿಧಾನ ಮಂಡಲದ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ(ತಿದ್ದುಪಡಿ) ಅಧಿನಿಯಮ 2009 ರ ಪ್ರಕರಣ 3(ಸಿಸಿಸಿ)ರ ರೀತ್ಯಾ ವಿಧಾನ ಪರಿಷತ್ತಿನ ಮಾನ್ಯ ವಿರೋಧ ಪಕ್ಷದ ನಾಯಕರು, ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನರವರನ್ನು ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರನ್ನಾಗಿ ಹೆಸರಿಸಿರುತ್ತಾರೆ.

ಆದುದರಿಂದ, ದಿನಾಂಕ:02.07.2018 ರಿಂದ ಜಾರಿಗೆ ಬರುವಂತೆ **ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ** ಅವರನ್ನು ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರನ್ನಾಗಿ ನೇಮಕ ಮಾಡಲಾಗಿದೆ.

ಕೆ.ಆರ್. ಮಹಾಲಕ್ಷ್ಮಿ
ಕಾರ್ಯದರ್ಶಿ

ವಿಧಾನ ಪರಿಷತ್ತಿನ ಎಲ್ಲಾ ಮಾನ್ಯ ಸದಸ್ಯರುಗಳ ಮಾಹಿತಿಗಾಗಿ.

# ಕರ್ನಾಟಕ ವಿಧಾನ ಪರಿಷತ್ತು
# ನೂರ ಮೂವತ್ತೈದನೆಯ ಅಧಿವೇಶನ

**ಲಘು ಪ್ರಕಟಣೆ ಭಾಗ –2**

**(ಸಾಂಸದಿಕ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದ ಸಾಮಾನ್ಯ ಮಾಹಿತಿ)**

**ಸೋಮವಾರ, ದಿನಾಂಕ: 02ನೇ ಜುಲೈ, 2018**

**ಸಂಖ್ಯೆ: 27**

ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 2(1)ರ ಪ್ರಕಾರ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರಾದ ಡಾ: **ಜಯಮಾಲ ರಾಮಚಂದ್ರ,** ಅವರನ್ನು ವಿಧಾನ ಪರಿಷತ್ತಿನ ಸಭಾನಾಯಕರನ್ನಾಗಿ ನೇಮಕ ಮಾಡಲಾಗಿದೆ.

ಕೆ.ಆರ್. ಮಹಾಲಕ್ಷ್ಮಿ
ಕಾರ್ಯದರ್ಶಿ

ವಿಧಾನ ಪರಿಷತ್ತಿನ ಎಲ್ಲಾ ಮಾನ್ಯ ಸದಸ್ಯರುಗಳ ಮಾಹಿತಿಗಾಗಿ.